# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ದಿನಾಂಕ:04.06.2022 ರ ಶನಿವಾರ ರಂದು **ಮಧ್ಯಾಹ್ನ:03.00** ಗಂಟೆಗೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಬೇಗೂರು ವಾರ್ಡ್ ಸಂಖ್ಯೆ-192 ರ ವಾರ್ಡ್ ಸಮಿತಿ ಸಭೆಯನ್ನು ಮಾನ್ಯ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳಾದಂತಹ ಶ್ರೀ.ನೀಲಕಂಠಯ್ಯ.ಕೆ.ಪಿ. ಸಹಾಯಕ ಕಾರ್ಯಪಾಲಕ ಅಭಿಯಂತರರು ರವರ ಸಮ್ಮುಖದಲ್ಲಿ ಅವರ ಅಧ್ಯಕ್ಷತೆಯೊಂದಿಗೆ ಬೇಗೂರು ಉಪ-ವಿಭಾಗದ ಕಛೇರಿಯಲ್ಲಿ ವಾರ್ಡ್ ಸಮಿತಿ ಸಭೆಯನ್ನು ನಡೆಸಲಾಯಿತು.

ವಾರ್ಡ್ ಸಮಿತಿ ಕಾರ್ಯದರ್ಶಿ ಶ್ರೀ.ಚಲುವರಾಜು.ಎಸ್. ಕಿರಿಯ ಅಭಿಯಂತರರು, ವಾರ್ಡ್ ಸಂಖ್ಯೆ-192 ಬೇಗೂರು ರವರು ಸಭೆಗೆ ಹಾಜರಾಗಿದ್ದಂತಹ ಅಧ್ಯಕ್ಷರು, ಸದಸ್ಯರು, ಅಧಿಕಾರಿಗಳು, ಹಾಗೂ ಇತರರನ್ನು ಸ್ವಾಗತಿಸಿ ಕಾರ್ಯಕ್ರಮ ಪ್ರಾರಂಭಿಸಿದರು.

**ಸಭೆಯಲ್ಲಿ ಚರ್ಚಿಸಬೇಕಾದ ವಿಷಯಗಳು:**

1. ಕೋವಿಡ್ ವ್ಯಾಕ್ಸಿನ್ ಲಸಿಕೆಗಳನ್ನು ಹಾಕಿಸಿಕೊಳ್ಳಲು ಸಾರ್ವಜನಿಕರಿಗೆ ತಿಳುವಳಿಕೆ ಮೂಡಿಸುವ ಬಗ್ಗೆ.
2. ಕುಡಿಯುವ ನೀರು ಸರಬರಾಜು ಬಗ್ಗೆ,
3. ಘನತ್ಯಾಜ್ಯ ಬ್ಲಾಕ್‌ಸ್ಪಾಟ್‌ಗಳನ್ನು ತೆರವು ಮಾಡುವ ಬಗ್ಗೆ,
4. ವಾರ್ಡ್‌ನ ಸಾರ್ವಜನಿಕರ ಕುಂದುಕೊರತೆಗಳ ಬಗ್ಗೆ,
5. ಬೀದಿ ದೀಪಗಳ ನಿರ್ವಹಣೆಯ ಬಗ್ಗೆ,
6. ರಸ್ತೆ ಗುಂಡಿಗಳನ್ನು ಮುಚ್ಚುವ ಬಗ್ಗೆ,

**ವಾರ್ಡ್ ನಂ-192 ವಾರ್ಡ್ ಸಮಿತಿ ಸಭೆಗೆ ಹಾಜರಾಗಲು ಸೂಚಿಸಿರುವವರ ವಿವರ**

| ಕ್ರ.ಸಂ | ಹೆಸರು | ಹುದ್ದೆ | ಹಾಜರಾತಿ |
|---|---|---|---|
| 1 | ಶ್ರೀ.ನೀಲಕಂಠಯ್ಯ.ಕೆ.ಪಿ. | ಅಧ್ಯಕ್ಷರು/ನೋಡೆಲ್ ಅಧಿಕಾರಿಗಳು | ಹಾಜರಾಗಿರುತ್ತಾರೆ |
| 2 | ಶ್ರೀ.ಚಲುವರಾಜು.ಎಸ್. | ಕಾರ್ಯದರ್ಶಿ (ಕಿ.ಅ.) | ಹಾಜರಾಗಿರುತ್ತಾರೆ |
| 3 | ಶ್ರೀ.ಶ್ರೀಧರ್.ಎಸ್. | ಹಿ.ಆ.ಪ | ಹಾಜರಾಗಿರುತ್ತಾರೆ |
| 4 | ಶ್ರೀ.ಎಸ್,ರಾಜೇಶ್ | ಬೆಸ್ಕಾಂ. ಸ.ಅ. | ಹಾಜರಾಗಿರುತ್ತಾರೆ |
| 5 | ಶ್ರೀ.ರಮೇಶ್.ಎಲ್. | ಕಿ.ಆ.ಪ. | ಹಾಜರಾಗಿರುತ್ತಾರೆ |
| 6 | ಬಿ.ಅಚ್ಯುತ್ ರಾವ್ | ಸಾರ್ವಜನಿಕರು | ಹಾಜರಾಗಿರುತ್ತಾರೆ |
| 7 | ಗಿರಿ ಪ್ರಸಾದ್ | ಸಾರ್ವಜನಿಕರು | ಹಾಜರಾಗಿರುತ್ತಾರೆ |
| 8 | ಬಿ.ಜಿ.ಸಂಪತ್ | ಸಾರ್ವಜನಿಕರು | ಹಾಜರಾಗಿರುತ್ತಾರೆ |
| 9 | ರಾಜು | ಸಾರ್ವಜನಿಕರು | ಹಾಜರಾಗಿರುತ್ತಾರೆ |
| 10 | ಅಕ್ರಮ್ ಪಾಷ | ಸಾರ್ವಜನಿಕರು | ಹಾಜರಾಗಿರುತ್ತಾರೆ |
| 11 | ಚಾನ್ ಪಾಷ | ಸಾರ್ವಜನಿಕರು | ಹಾಜರಾಗಿರುತ್ತಾರೆ |
| 12 | ಫೈಸನ್ ಖಾನ್ | ಸಾರ್ವಜನಿಕರು | ಹಾಜರಾಗಿರುತ್ತಾರೆ |
| 13 | ರಹಮತ್ ಉಲ್ಲಾ | ಸಾರ್ವಜನಿಕರು | ಹಾಜರಾಗಿರುತ್ತಾರೆ |
| 14 | ಹಿದಯಾತ್ | ಸಾರ್ವಜನಿಕರು | ಹಾಜರಾಗಿರುತ್ತಾರೆ |
| 15 | ಸಲ್ಮಾನ್ | ಸಾರ್ವಜನಿಕರು | ಹಾಜರಾಗಿರುತ್ತಾರೆ |

## ಸಭೆಯ ನಡಾವಳಿಗಳು

1. ವಾರ್ಡ್ ನಂ-192 ಬೇಗೂರು ವ್ಯಾಪ್ತಿಯಲ್ಲಿ ಕೋವಿಡ್-19 ಮಹಾಮಾರಿ ಸಾಂಕ್ರಾಮಿಕ ರೋಗ ಹರಡದಂತೆ ಸಾರ್ವಜನಿಕರಿಗೆ ಕೋವಿಡ್ ಬೂಸ್ಟರ್ ವ್ಯಾಕ್ಸಿನ್ ಚುಚ್ಚುಮದ್ದು ನೀಡಲು ಆರೋಗ್ಯ ಇಲಾಖೆಯ ವೈದ್ಯಾಧಿಕಾರಿಗಳಿಗೆ ವಾರ್ಡ್ ಸಮಿತಿ ಸಭೆಯಲ್ಲಿ ನೋಡಲ್ ಅಧಿಕಾರಿಗಳು ಸೂಚಿಸಿದರು.

2. ವಾರ್ಡ್ ನಂ-192 ಬೇಗೂರು ವ್ಯಾಪ್ತಿಯಲ್ಲಿ ಬರುವ ಡ್ಯುಯೋ ಹೈಟ್ಸ್ ಬಡಾವಣೆಯ ಪ್ರದೇಶದಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ. ವತಿಯಿಂದ ಕುಡಿಯುವ ನೀರಿನ ಸಂಪರ್ಕಕ್ಕಾಗಿ ರಸ್ತೆಗಳನ್ನು ಅಗೆದಿದ್ದು ರಸ್ತೆಗಳು ಹಾಳಾಗಿದ್ದು ಸಾರ್ವಜನಿಕರ ಮತ್ತು ವಾಹನ ಸಂಚಾರಕ್ಕೆ ನೂತನವಾಗಿ ರಸ್ತೆಯನ್ನು ನಿರ್ಮಿಸಿ ಕೊಡಲು ಸಭೆಯಲ್ಲಿ ನೆರೆದಿದ್ದ ಸಾರ್ವಜನಿಕರು ದೂರು ಸಲ್ಲಿಸಿದರು. ಮಾನ್ಯ ವಾರ್ಡ್ ಸಮಿತಿ ಅಧ್ಯಕ್ಷರು ಸಭೆಯಲ್ಲಿ ಉಪಸ್ಥಿತರಿದ್ದ ವಾರ್ಡ್‌ನ ಸಹಾಯಕ ಅಭಿಯಂತರರು ಈ ಕೂಡಲೇ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಕ್ರಮ: ಸಹಾಯಕ ಅಭಿಯಂತರರು, ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು ವಾರ್ಡ್ ನಂ-192

3. ಸದರಿ ವಾರ್ಡ್‌ನ ದೇವರಚಿಕ್ಕನಹಳ್ಳಿ ಮುಖ್ಯರಸ್ತೆಯಲ್ಲಿ ಹಂಪ್ಸ್‌ಗಳನ್ನು ನಿರ್ಮಾಣ ಮಾಡಿಕೊಡಲು ಸಭೆಯಲ್ಲಿ ನೆರೆದಿದ್ದ ಸಾರ್ವಜನಿಕರು ದೂರು ಸಲ್ಲಿಸಿದರು. ಮಾನ್ಯ ವಾರ್ಡ್ ಸಮಿತಿ ಅಧ್ಯಕ್ಷರು ಸಭೆಯಲ್ಲಿ ಉಪಸ್ಥಿತರಿದ್ದ ವಾರ್ಡ್‌ನ ಸಹಾಯಕ ಅಭಿಯಂತರರು ಈ ಕೂಡಲೇ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಕ್ರಮ:ಸಹಾಯಕ ಅಭಿಯಂತರರು ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು

4. ಸದರಿ ವಾರ್ಡ್‌ನ ವಿಶ್ವಪ್ರಿಯಾ ಬಡಾವಣೆಯ ರಾಜಕಾಲುವೆಯಲ್ಲಿ ಹೂಳು ತುಂಬಿದ್ದು ಮಳೆಗಾಲ ಪ್ರಾರಂಭವಾಗುತ್ತಿರುವುದರಿಂದ ರಾಜಕಾಲುವೆಯ ನೀರು ಪ್ರವಾಹದ ರೀತಿ ಹರಿದು ತೊಂದರೆಯಾಗುವುದಾಗಿ ತಕ್ಷಣವೇ ಹೂಳು ತೆಗೆಯಲು ವ್ಯವಸ್ಥೆ ಮಾಡಬೇಕಾಗಿ ಸಭೆಯಲ್ಲಿ ನೆರೆದಿದ್ದ ಸಾರ್ವಜನಿಕರು ದೂರು ಸಲ್ಲಿಸಿದರು. ಮಾನ್ಯ ವಾರ್ಡ್ ಸಮಿತಿ ಅಧ್ಯಕ್ಷರು ಸಭೆಯಲ್ಲಿ ಉಪಸ್ಥಿತರಿದ್ದ ವಾರ್ಡ್‌ನ ಸಹಾಯಕ ಅಭಿಯಂತರರು ಈ ಕೂಡಲೇ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಕ್ರಮ:ಸಹಾಯಕ ಅಭಿಯಂತರರು ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು

5. ಸದರಿ ವಾರ್ಡ್‌ನ ಸುಬಾಷ್‌ನಗರ 2ನೇ ಬ್ಲಾಕ್ ರಸ್ತೆ ನಿರ್ಮಾಣ ಕಾಮಗಾರಿಯು ಇನ್ನು ಪೂರ್ಣಗೊಂಡಿಲ್ಲವೆಂದು ಇದರಿಂದ ಸಾರ್ವಜನಿಕರ ಮತ್ತು ಸಂಚಾರಕ್ಕೆ ಅಡಚಣೆಯುಂಟಾಗುವುದಾಗಿ ಹಾಗೂ ಇದನ್ನು ಆದಷ್ಟು ಶೀಘ್ರವಾಗಿ ರಸ್ತೆ ನಿರ್ಮಾಣ ಮಾಡಿಕೊಡಬೇಕಾಗಿ ಸಭೆಯಲ್ಲಿ ನೆರೆದಿದ್ದ ಸಾರ್ವಜನಿಕರು ದೂರು ಸಲ್ಲಿಸಿದರು. ಮಾನ್ಯ ವಾರ್ಡ್ ಸಮಿತಿ ಅಧ್ಯಕ್ಷರು ಸಭೆಯಲ್ಲಿ ಉಪಸ್ಥಿತರಿದ್ದ ವಾರ್ಡ್‌ನ ಸಹಾಯಕ ಅಭಿಯಂತರರು ಈ ಕೂಡಲೇ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.
ಕ್ರಮ:ಸಹಾಯಕ ಅಭಿಯಂತರರು ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು

6. ಸದರಿ ವಾರ್ಡ್‌ನ ಚಿಕ್ಕ ತೋಗೂರು, ಬೇಗೂರು, ಎ.ಕೆ.ಕಾಲೋನಿ ಮತ್ತು ವಿಶ್ವಪ್ರಿಯಾ ಬಡಾವಣೆಗಳಲ್ಲಿ ಬೀದಿ ದೀಪಗಳು ಹಾಳಾಗಿದ್ದು ದುರಸ್ಥಿಯಲ್ಲಿರುವ ಬೀದಿ ದೀಪಗಳನ್ನು ಸರಿಪಡಿಸಿಕೊಡಲು ಸಭೆಯಲ್ಲಿ ನೆರೆದಿದ್ದ ಸಾರ್ವಜನಿಕರು ದೂರು ಸಲ್ಲಿಸಿದರು. ಮಾನ್ಯ ವಾರ್ಡ್ ಸಮಿತಿ ಅಧ್ಯಕ್ಷರು ಸಭೆಯಲ್ಲಿ ಉಪಸ್ಥಿತರಿದ್ದ ವಾರ್ಡ್‌ನ ಸಹಾಯಕ ಅಭಿಯಂತರರು ಈ ಕೂಡಲೇ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಕ್ರಮ:ಸಹಾಯಕ ಅಭಿಯಂತರರು ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು

7. ಸದರಿ ವಾರ್ಡ್ ವ್ಯಾಪ್ತಿಯ ಚರಂಡಿಗಳಲ್ಲಿ ಹೂಳು ತುಂಬಿದ್ದು ಮಳೆಗಾಲ ಪ್ರಾರಂಭವಾಗುತ್ತಿರುವುದರಿಂದ ಚರಂಡಿಯ ನೀರು ರಸ್ತೆಯ ಮೇಲೆ ಮತ್ತು ಮನೆಗಳಿಗೆ ಹರಿದು ತೊಂದರೆಯಾಗುವುದಾಗಿ ತಕ್ಷಣವೇ ಹೂಳು ತೆಗೆಯಲು ವ್ಯವಸ್ಥೆ ಮಾಡಬೇಕಾಗಿ ಸಭೆಯಲ್ಲಿ ನೆರೆದಿದ್ದ ಸಾರ್ವಜನಿಕರು ದೂರು ಸಲ್ಲಿಸಿದರು. ಮಾನ್ಯ ವಾರ್ಡ್ ಸಮಿತಿ ಅಧ್ಯಕ್ಷರು ಸಭೆಯಲ್ಲಿ ಉಪಸ್ಥಿತರಿದ್ದ ವಾರ್ಡ್‌ನ ಸಹಾಯಕ ಅಭಿಯಂತರರು ಈ ಕೂಡಲೇ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.
ಕ್ರಮ:ಸಹಾಯಕ ಅಭಿಯಂತರರು ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು

8. ಸದರಿ ವಾರ್ಡ್ ವ್ಯಾಪ್ತಿಯ ಪ್ರದೇಶದ ರಸ್ತೆಗಳಲ್ಲಿ ಗುಂಡಿ ಬಿದ್ದಿದ್ದು ವಾಹನ ಸಂಚಾರಕ್ಕೆ ತುಂಬಾ ತೊಂದರೆಯಾಗುತ್ತಿದ್ದು ರಸ್ತೆಗಳಲ್ಲಿನ ಗುಂಡಿಗಳನ್ನು ಮುಚ್ಚಿಕೊಡಲು ಸಭೆಯಲ್ಲಿ ನೆರೆದಿದ್ದ ಸಾರ್ವಜನಿಕರು ದೂರು ಸಲ್ಲಿಸಿದರು. ಮಾನ್ಯ ವಾರ್ಡ್ ಸಮಿತಿ ಅಧ್ಯಕ್ಷರು ಸಭೆಯಲ್ಲಿ ಉಪಸ್ಥಿತರಿದ್ದ ವಾರ್ಡ್‌ನ ಸಹಾಯಕ ಅಭಿಯಂತರರು ಈ ಕೂಡಲೇ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಕ್ರಮ:ಸಹಾಯಕ ಅಭಿಯಂತರರು ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು

9. ಸದರಿ ವಾರ್ಡ್ ವ್ಯಾಪ್ತಿಯ ವಿಶ್ವಪ್ರಿಯಾ ಬಡಾವಣೆ, ಸುಬಾಷ್‌ನಗರ ಪ್ರದೇಶಗಳಲ್ಲಿ ಕಸದ ಸಮಸ್ಯೆಯಿರುವುದಾಗಿ ಇದರಿಂದ ಮಕ್ಕಳ ಆರೋಗ್ಯದ ಮೇಲೆ ಸಮಸ್ಯೆ ಉಂಟಾಗುವುದರಿಂದ ಕೂಡಲೇ ಸಮಸ್ಯೆಯನ್ನು ಪರಿಹಿಸಿಕೊಡಲು ಸಭೆಯಲ್ಲಿ ನೆರೆದಿದ್ದ ಸಾರ್ವಜನಿಕರು ದೂರು ಸಲ್ಲಿಸಿದರು. ಮಾನ್ಯ ವಾರ್ಡ್ ಸಮಿತಿ ಅಧ್ಯಕ್ಷರು ಸಭೆಯಲ್ಲಿ ಉಪಸ್ಥಿತರಿದ್ದ ವಾರ್ಡ್‌ನ ಕಿರಿಯ ಆರೋಗ್ಯ ಪರಿವೀಕ್ಷಕರು ರವರಿಗೆ ಈ ಕೂಡಲೇ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.
ಕ್ರಮ: ಕಿರಿಯ ಆರೋಗ್ಯ ಪರಿವೀಕ್ಷಕರು ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು

<u>ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.</u>

ಕಾರ್ಯದರ್ಶಿ ಮತ್ತು ಸಂಚಾಲಕರು
ವಾರ್ಡ್ ನಂ-192 ಬೇಗೂರು

4/6/2022

ಅಧ್ಯಕ್ಷರು
ವಾರ್ಡ್ ಕಮಿಟಿ ಅಧ್ಯಕ್ಷರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ವಾರ್ಡ್ ನಂ-192, ಬೇಗೂರು

**ಪ್ರತಿಗಳು:-**

1) ಜಂಟಿ ಆಯುಕ್ತರು (ಬೊಮ್ಮನಹಳ್ಳಿ) ವಲಯ ರವರ ಅವಗಾಹನೆಗೆ,
2) ಉಪ ಆಯುಕ್ತರು (ಬೊಮ್ಮನಹಳ್ಳಿ) ವಲಯ ರವರ ಅವಗಾಹನೆಗೆ,
3) ಸಹಾಯಕ ಕಂದಾಯ ಅಧಿಕಾರಿ (ಬೇಗೂರು) ಉಪವಿಭಾಗ ರವರ ಅವಗಾಹನೆಗೆ,
4) ವಾರ್ಡ್ ಸಮಿತಿ ಅಧ್ಯಕ್ಷರು ಹಾಗೂ ನೋಡೆಲ್ ಅಧಿಕಾರಿ ರವರ ಅವಗಾಹನೆಗೆ,
5) ಕಛೇರಿ ಕಡತಕ್ಕೆ